# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ

KANNADA POST

ಇದು ಸುದ್ದಿ ವಿಳಾಸ

ಕನ್ನಡ ದಿನಪತ್ರಿಕೆ

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.02 | Issue. 163 | Pages. 2 | Date: 05-06-2026, FRIDAY RNI NO: KARKAN/2024/89601 Kannada Daily

ಸಂಪುಟ : 02 - ಸಂಚಿಕೆ : 163 - ಪುಟಗಳು : 2 05-06-2026 ಶುಕ್ರವಾರ Ph: 8762954248 ದರ : ₹1


## ಕೇವಲ ಶೇ.5 ಮತದಾರರ ಹೆಸರು ತಾಳೆಯಾಗಿಲ್ಲ

# ಜಿಲ್ಲೆಯಲ್ಲಿ ಶೇ. 94 ಕಾರ್ಯ ಪೂರ್ಣ : ಡಿ.ಸಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕರ್ನಾಟಕದಲ್ಲಿ ವಿಶೇಷ ಸಮಗ್ರ ಪರಿಷ್ಕರಣೆಗೆ ಅರ್ಹತಾ ದಿನಾಂಕ 2026 ಅ.1 ಆಗಿದ್ದು, ಅಷ್ಟರೊಳಗೆ ಜಿಲ್ಲೆಯಲ್ಲೂ ಏನೆಲ್ಲ ಪ್ರಕ್ರಿಯೆ ಮಾಡಬೇಕೋ ಅದನ್ನು ಹಂತ ಹಂತವಾಗಿ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ತಿಳಿಸಿದರು.

ಇಂದು ಡಿಸಿ ಕಚೇರಿಯಲ್ಲಿ ಸರ್ ಬಗ್ಗೆ ಕೂಲಂಕಷ ಮಾಹಿತಿ ನೀಡಿದ ಅವರು, ಪೂರ್ವ ತಯಾರಿ ತರಬೇತಿ ಮತ್ತು ಮುದ್ರಣ ಜೂ.20 ರಿಂದ 29 ರ ವರೆಗೆ ನಡೆಯಲಿದೆ. ಮತಗಟ್ಟೆ ಅಧಿಕಾರಿಗಳು ಜೂ.30 ರಿಂದ ಜು.29ರೊಳಗೆ ಮನೆ ಮನೆ ಭೇಟಿ ನೀಡುವರು ಎಂದರು.

ಮತಗಟ್ಟೆಗಳ ಪುನರ್ ವಿಂಗಡಣೆ ಕಾರ್ಯ ಜು.29 ರಂದು ನಡೆಯಲಿದ್ದು, ಕರಡು ಮತದಾರರ ಪಟ್ಟಿಯನ್ನು ಆ.5 ರಂದು ಪ್ರಕಟ ಮಾಡಲಾಗುವುದು ಎಂದು ತಿಳಿಸಿದರು.

ಮತದಾರರು ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ಆ.8 ರಿಂದ ಸೆ.4 ರ ವರೆಗೆ ಅವಕಾಶ ನೀಡಲಾಗಿದೆ ಎಂದ ಅವರು, ಸೂಚನೆ ಹಂತ/ಹಕ್ಕು ಮತ್ತು ಆಕ್ಷೇಪಣೆಗಳ ತೀರುವಳಿಗೆ ಆ.5 ರಿಂದ ಅ.3 ರ ವರೆಗೆ ಅವಕಾಶ ನೀಡಲಾಗಿದ್ದು, ಅಂತಿಮ ಮತದಾರರ ಪಟ್ಟಿ ಅಕ್ಟೋಬರ್ 7 ರಂದು ಪ್ರಕಟವಾಗಲಿದೆ ಎಂದು ವಿವರಿಸಿದರು.

ಹಾಸನ ಜಿಲ್ಲೆಯಲ್ಲಿ ಸರ್ ನಿರ್ವಹಣೆಗಾಗಿ 1968 ಬೂತ್ ಮಟ್ಟದ ಅಧಿಕಾರಿಗಳು(ಬಿಎಲ್‌ಒ)




ಪರಿಷ್ಕರಣಾ ಪ್ರಕ್ರಿಯೆಯಲ್ಲಿ ಭಾಗಿಯಾಗಲಿದ್ದಾರೆ. ವಿಶೇಷ ತೀವ್ರ ಪರಿಷ್ಕರಣೆಯು ಜಿಲ್ಲೆಯಲ್ಲಿ 15,64,129 ಮತದಾರರನ್ನು ಒಳಗೊಂಡಿರುತ್ತದೆ ಎಂದು ಹೇಳಿದರು.

329 ಮಂದಿ ಬಿಎಲ್‌ಒ ಸೂಪರ್ ವೈಸರ್‌ಗಳಿದ್ದು, 35 ಮಂದಿ ವಿಧಾನಸಭಾ ಕ್ಷೇತ್ರವಾರು ಮಾಸ್ಟರ್ ಟ್ರೈನೀಸ್ ಇದ್ದಾರೆ ಎಂದು ವಿವರಿಸಿದರು.

### ಶೇ.93.93 ಪ್ರಗತಿ

ಪ್ರಸ್ತುತ ಜಿಲ್ಲೆಯ ವಿಶೇಷ ಸಮಗ್ರ ಪರಿಷ್ಕರಣೆಯ ಪೂರ್ವಭಾವಿ ಕಾರ್ಯವಾಗಿ 2025ರ ಮತದಾರರ ಪಟ್ಟಿಯಲ್ಲಿರುವ ಮತದಾರರನ್ನು 2002ರ ಮತದಾರರ ಪಟ್ಟಿಯೊಂದಿಗೆ ಹೊಂದಾಣಿಕೆ ಮಾಡಿ, ಲಭ್ಯವಿರುವ ಮತದಾರರನ್ನು ಹಾಗೂ ಅವರ ಸಂತತಿ ವಿವರಗಳನ್ನು 2025ನೇ ಸಾಲಿನ ಅಂತಿಮ ಮತದಾರರ ಪಟ್ಟಿಗೆ ಜೋಡಣೆ ಮಾಡಲಾಗಿದೆ.

ಈ ಕಾರ್ಯದಲ್ಲಿ ಜಿಲ್ಲೆಯಲ್ಲಿ ಶೇ.93.93 ರಷ್ಟು ಪ್ರಗತಿ ಸಾಧಿಸಲಾಗಿದೆ. ಉಳಿದ ಮತದಾರರನ್ನು ಮತ್ತೊಮ್ಮೆ ಪರಿಶೀಲಿಸಿ, ಜೋಡಣೆ ಮಾಡುವ ಕಾರ್ಯವು ಪ್ರಗತಿಯಲ್ಲಿದ್ದು, ಜೋಡಣೆ ಯಾಗದೇ ಉಳಿದಿರುವ ಮತದಾರರನ್ನು ಪತ್ತೆ ಹಚ್ಚಲಾಗುವುದು, ಅಂತಹ ಮತದಾರರು ಮರಣ, ವಲಸೆ, ಗೈರು ಅಥವಾ ನಕಲು ಮತದಾರರು ಎಂದು ವಿಂಗಡಣೆ ಮಾಡಿ, ಪ್ರತ್ಯೇಕವಾಗಿ ಪಟ್ಟಿ ಸಿದ್ಧಪಡಿಸಲಾಗುವುದು ಎಂದು ತಿಳಿಸಿದರು.

### BLO ಮತ್ತು VFC ಕೇಂದ್ರ

ವಿಶೇಷ ಸಮಗ್ರ ಪರಿಷ್ಕರಣೆ ಕಾರ್ಯದಲ್ಲಿ, ಮತದಾರರಿಗೆ ಸುಗಮವಾಗಿ ಮಾಹಿತಿ ಪಡೆಯಲು ಹಾಗೂ ಅನುಕೂಲಕ್ಕಾಗಿ ಗ್ರಾಮೀಣ ಪ್ರದೇಶದಲ್ಲಿ ಎಲ್ಲಾ ಗ್ರಾಮ ಪಂಚಾಯಿತಿಗಳಲ್ಲಿ ಹಾಗೂ ನಗರ ಪ್ರದೇಶದಲ್ಲಿ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಮತದಾರರ ಸೌಕರ್ಯ ಕೇಂದ್ರ ಹಾಗೂ ಮತಗಟ್ಟೆ ಅಧಿಕಾರಿಗಳ ಸೌಕರ್ಯ ಕೇಂದ್ರಗಳನ್ನು ಸ್ಥಾಪಿಸಲಾಗಿದೆ.

ಈ ಕೇಂದ್ರದಲ್ಲಿ ವಯೋವೃದ್ಧರು, ಅನಾರೋಗ್ಯದಿಂದ ಬಳಲುತ್ತಿರುವವರು, ವಿಶೇಷ ಚೇತನರು ಹಾಗೂ ದುರ್ಬಲ ಮತದಾರರಿಗೆ ಉಚಿತ ಪ್ರಮಾಣ ಪತ್ರ, ಕಾರ್ಯದಲ್ಲಿ ಭಾಗವಹಿಸಲು ಸಂಬಂಧಪಡುವಂತೆ ಸ್ವಯಂ ಸೇವಕ ಸಿಬ್ಬಂದಿಗಳನ್ನು ನೇಮಕ ಮಾಡಲಾಗಿದೆ ಎಂದು ತಿಳಿಸಿದರು.

> ಭಾರತ ಚುನಾವಣಾ ಆಯೋಗದ ನಿರ್ದೇಶನದಂತೆ ಸಾರ್ವಜನಿಕರು ಮತದಾರರ ಪಟ್ಟಿಗಳ ಕುರಿತು ಯಾವುದೇ ಮಾಹಿತಿ ಪಡೆಯಲು ಹಾಗೂ ಸಲಹೆ/ದೂರುಗಳನ್ನು ದಾಖಲಿಸಲು ಜಿಲ್ಲಾ ಹಂತದಲ್ಲಿ ಡಿಸ್ಟ್ರಿಕ್ಟ್ ಕಾಂಟ್ಯಾಕ್ಟ್ ಸೆಂಟರ್‌ನ್ನು ಸ್ಥಾಪಿಸಲಾಗಿದ್ದು, 1950ಕ್ಕೆ ಉಚಿತವಾಗಿ ಕರೆ ಮಾಡಿ ಬೇಕಾದ ಮಾಹಿತಿ ಪಡೆಯಬಹುದು. ಅಲ್ಲದೆ ಮತದಾರರು ಭಾರತ ಚುನಾವಣಾ ಆಯೋಗವೂ ಸಿದ್ಧಪಡಿಸಿರುವ Eci Net Mobile App/VHA Mobile APP ಅಥವಾ https://www.eci.gov.in.ngsp ಗಳನ್ನು ಬಳಸಿಕೊಂಡು ಮಾಹಿತಿ ಪಡೆಯಬಹುದಾಗಿದೆ ಎಂದು ಡಿಸಿ ವಿವರಿಸಿದರು.

## ಹೆಚ್.ಡಿ.ಸಿ.ಸಿ ಬ್ಯಾಂಕ್ ಹೆಸರಲ್ಲಿ ವಂಚನೆ

# ಸಮಗ್ರ ತನಿಖೆಗೆ ಕೆಆರ್‌ಎಸ್ ಪಕ್ಷ ಆಗ್ರಹ: ಹೋರಾಟಕ್ಕೆ ನಿರ್ಧಾರ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಹಾಸನ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ನಲ್ಲಿ ಉದ್ಯೋಗ ಕೊಡಿಸುವುದಾಗಿ ಅರಸೀಕೆರೆ ಶಾಖೆಯ ಸೂಪರ್ ವೈಸರ್ ಸೋಮೇಶ್ ಹಾಗೂ ಅರಸೀಕೆರೆ ತಾಲೂಕು ಮೈಲನಹಳ್ಳಿ ಗ್ರಾಮದ ಸುರೇಶ್

ಎಂಬುವರು ಹತ್ತಾರು ಜನರಿಂದ ಕೋಟಿ ಕೋಟಿ ರೂ. ವಸೂಲಿ ಮಾಡಿದ್ದಾರೆ. ಈ ಬಗ್ಗೆ ಬ್ಯಾಂಕ್ ಆಡಳಿತ ಮಂಡಳಿಯವರು ಪೊಲೀಸರಿಗೆ ದೂರು ನೀಡಿ ವಿಶೇಷ ತನಿಖೆ ಮಾಡಿಸಬೇಕು ಎಂದು ಕೆ.ಆರ್.ಎಸ್. ಪಕ್ಷದ ರಾಜ್ಯ ಸಮಿತಿ ಸದಸ್ಯ ಉಮೇಶ್ ಬೆಳಗುಂಬ ಒತ್ತಾಯಿಸಿದರು.

ಇಂದು ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ಈ ಇಬ್ಬರೂ ಆಸಾಮಿಗಳು ಎಚ್‌ಡಿಸಿಸಿ ಬ್ಯಾಂಕ್‌ನಲ್ಲಿ ಉದ್ಯೋಗ ಕೊಡಿಸುವುದಾಗಿ ನಂಬಿಸಿ ನೂರಾರು ಯುವಕರಿಂದ ಹಣ ಪಡೆದು ವಂಚಿಸಿದ್ದಾರೆ. ರಾಜಶೇಖರ ರೆಡ್ಡಿ ಎಂಬುವರು 42 ಲಕ್ಷ ಕಳೆದುಕೊಂಡಿದ್ದಾರೆ. ಹೀಗೆ 500ಕ್ಕೂ ಹೆಚ್ಚು ಆಕಾಂಕ್ಷಿಗಳಿಂದ ಸುಮಾರು 100 ಕೋಟಿ ವಂಚನೆ ಮಾಡಿದ್ದಾರೆ ಎಂದು ದೂರಿದರು.

ಆತಂಕಕಾರಿ ಸಂಗತಿ ಎಂದರೆ ಬ್ಯಾಂಕಿನ ಹೆಸರಿನ ಲೆಟರ್ ಹೆಡ್ ನಕಲಿ ನೇಮಕಾತಿ ದಾಖಲೆ, ಪ್ರವೇಶ ಪತ್ರ ಹಾಗೂ ಆಯ್ಕೆ ಪ್ರಕ್ರಿಯೆಗೆ ಸಂಬಂಧಿಸಿದ ದಾಖಲೆಗಳನ್ನು ಸೃಷ್ಟಿಸಲಾಗಿದೆ. ಕೆಲವು ದಾಖಲೆಗಳಲ್ಲಿ ಬ್ಯಾಂಕಿನ ವ್ಯವಸ್ಥಾಪಕ ನಿರ್ದೇಶಕ (ಎಂಡಿ) ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ (ಸಿಇಒ) ಅವರ ಸಹಿಗಳನ್ನು ಸಹ ನಕಲು ಮಾಡಲಾಗಿದೆ ಎಂದು ದೂರಿದರು. ಇದರಿಂದ ಅಭ್ಯರ್ಥಿಗಳು ನೇಮಕಾತಿ ನಿಜವೆಂದುಕೊಂಡು ನಂಬಿ ಹಣ ಪಾವತಿಸಿರುವ ಸಾಧ್ಯತೆ ಇದೆ ಎಂದರು.

ಕೆಲವರು ಸಾಲ ಮಾಡಿ, ಆಸ್ತಿ ಅಡಮಾನ ಇಟ್ಟು ಅಥವಾ ಕುಟುಂಬದ ಉಳಿತಾಯ ಹಣ ನೀಡಿ ಉದ್ಯೋಗದ ನಿರೀಕ್ಷೆಯಲ್ಲಿ ಹಣ ನೀಡಿದ್ದಾರೆ. ಇದರಿಂದ ಅನೇಕ ಕುಟುಂಬ ಆರ್ಥಿಕ ಸಂಕಷ್ಟಕ್ಕೆ ಸಿಲುಕಿವೆ ಎಂದರು. ಬ್ಯಾಂಕ್ ಅಧ್ಯಕ್ಷರಾದ ನಾಗರಾಜ್ ಅವರು, ಬ್ಯಾಂಕಿನಲ್ಲಿ ಯಾವುದೇ ನೇಮಕಾತಿ ಪ್ರಕ್ರಿಯೆ ನಡೆಯುತ್ತಿಲ್ಲ, ಬ್ಯಾಂಕ್ ಹೆಸರಿನಲ್ಲಿ ಯಾರಾದರೂ ಉದ್ಯೋಗ ನೀಡುವುದಾಗಿ ಹೇಳಿ ಹಣ ಕೇಳಿದರೆ ಸಾರ್ವಜನಿಕರು ನಂಬಬಾರದು ಎಂದು ಮನವಿ ಮಾಡಿದ್ದಾರೆ. ಆದರೆ ಇದು ಕೇವಲ ಹಣಕಾಸು ವಂಚನೆಯಲ್ಲ, ಸಾವಿರಾರು ಯುವಕರ ಭವಿಷ್ಯದೊಂದಿಗೆ ಆಟವಾಡಿದ ಪ್ರಕರಣವಾಗಿದೆ. ಪ್ರಕರಣದ ಹಿಂದಿರುವ ವ್ಯಕ್ತಿಗಳು, ಮಧ್ಯವರ್ತಿಗಳು ಹಾಗೂ ಸಹಕಾರ ನೀಡಿರುವವರ ಬಗ್ಗೆ ಸಮಗ್ರ ತನಿಖೆ ನಡೆಸಿ ಸತ್ಯಾಂಶವನ್ನು ಹೊರತರುವುದು ಅಗತ್ಯವಾಗಿದೆ. ಆ ಕೆಲಸವನ್ನು ಬ್ಯಾಂಕ್‌ನವರು ಮಾಡಬೇಕು ಎಂದು ಒತ್ತಾಯಿಸಿದರು.

# ಕೆ.ಎಂ.ಶಿವಲಿಂಗೇಗೌಡರಿಗೆ ಸಚಿವ ಸ್ಥಾನ ಫಿಕ್ಸ್ ಎಂದ ಸಂಸದ ಶ್ರೇಯಸ್ ಪಟೇಲ್



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಕಳೆದ ಮೂರು ವರ್ಷಗಳ ಕಾಲ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಪಂಚ ಗ್ಯಾರಂಟಿ ಅನುಷ್ಠಾನ ಮೂಲಕ ಬಡವರ ಧ್ವನಿಯಾಗಿ ಅತ್ಯದ್ಭುತ ಆಡಳಿತ ನೀಡಿದ್ದಾರೆ. ಇದೀಗ ನೂತನ ಮುಖ್ಯಮಂತ್ರಿಗಳಾಗಿ ಅಧಿಕಾರ ಸ್ವೀಕರಿಸಿರುವ ಡಿ.ಕೆ.ಶಿವಕುಮಾರ್ ಅವರೂ ಅದೇ ಹಾದಿಯಲ್ಲಿ ಮುನ್ನಡೆದು ರಾಜ್ಯಭಾರ ಮಾಡಲಿದ್ದಾರೆ ಎಂದು ಸಂಸದ ಶ್ರೇಯಸ್ ಪಟೇಲ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ.

ನಗರದಲ್ಲಿಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ರಾಜ್ಯ ರಾಜಕೀಯದ ಬೆಳವಣಿಗೆಗಳು ಹಾಗೂ ಜಿಲ್ಲೆಯ ಸಚಿವ ಸ್ಥಾನದ ಆಕಾಂಕ್ಷೆಗಳ ಬಗ್ಗೆ ಮುಕ್ತವಾಗಿ ತಮ್ಮ ಅಭಿಪ್ರಾಯ ಹಂಚಿಕೊಂಡರು.

ಡಿಕೆಶಿ ಪಕ್ಷದ ಶಿಸ್ತಿನ ಸಿಪಾಯಿ: ಡಿ.ಕೆ.ಶಿವಕುಮಾರ್ ಸಾಹೇಬರು ಪಕ್ಷದ ಶಿಸ್ತಿನ ಸಿಪಾಯಿ. ಬುಧವಾರ ನೂತನ ಮುಖ್ಯಮಂತ್ರಿಯಾಗಿ ಅವರು ಅಧಿಕಾರ ವಹಿಸಿಕೊಂಡಿದ್ದು, ನಮಗಂತೂ ಅವರ ನಾಯಕತ್ವದ ಮೇಲೆ ಅತೀವ ಆತ್ಮವಿಶ್ವಾಸವಿದೆ. ಮುಂದಿನ ಎರಡು ವರ್ಷಗಳ ಕಾಲ ಅವರು ಅತ್ಯುತ್ತಮ ಆಡಳಿತ ನೀಡಲಿದ್ದು, 2028ಕ್ಕೆ ಮತ್ತೆ ಕಾಂಗ್ರೆಸ್ ಸರ್ಕಾರವೇ ರಾಜ್ಯದಲ್ಲಿ ಅಧಿಕಾರಕ್ಕೆ ಬರಲಿದೆ ಎಂದು ಶ್ರೇಯಸ್ ಪಟೇಲ್ ಭವಿಷ್ಯ ನುಡಿದರು.

ಶಿವಲಿಂಗೇಗೌಡರಿಗೆ ಸಚಿವ ಸ್ಥಾನ ಖಚಿತ: ಹಿರಿಯ ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರಿಗೆ ಮೊದಲ ಹಂತದಲ್ಲಿ ಸಚಿವ ಸ್ಥಾನ ಕೈತಪ್ಪಿರುವ ವಿಚಾರವಾಗಿ ಪ್ರತಿಕ್ರಿಯಿಸಿದ ಸಂಸದರು, ನಾವು ಹೈಕಮಾಂಡ್‌ಗೆ ಈ ಹಿಂದೆಯೇ ಮನವಿ ಮಾಡಿದ್ದೆವು.

ಎರಡನೇ ಪಟ್ಟಿಯಲ್ಲಿ ನಿಮ್ಮ ಜಿಲ್ಲೆಗೆ ಪ್ರಾತಿನಿಧ್ಯ ಮತ್ತು ಪ್ರಾಮುಖ್ಯತೆ ನೀಡಲಾಗುವುದು ಎಂದು ಹೈಕಮಾಂಡ್ ಭರವಸೆ ನೀಡಿದೆ.

ಜಿಲ್ಲಾ ಉಸ್ತುವಾರಿಯಾಗಿ ಕೃಷ್ಣ ಭೈರೇಗೌಡರು ಉತ್ತಮವಾಗಿ ಕೆಲಸ ಮಾಡಿದ್ದಾರೆ, ಆದರೆ ನಮ್ಮ ಜಿಲ್ಲೆಯ ಜನರ ಕಷ್ಟ-ಸುಖ, ನಾಡಿಮಿಡಿತ ಹಾಗೂ ಅಭಿವೃದ್ಧಿಯ ಬಗ್ಗೆ ಸ್ಥಳೀಯರಿಗೆ ಹೆಚ್ಚು ಅರಿವಿರುತ್ತದೆ. ಹೀಗಾಗಿ ನೂರಕ್ಕೆ ನೂರು ನಮ್ಮ ಜಿಲ್ಲೆಗೆ ಪ್ರಾತಿನಿಧ್ಯ ಸಿಗಲಿದೆ, ಎರಡನೇ ಪಟ್ಟಿಯಲ್ಲಿ ಕೆ.ಎಂ.ಶಿವಲಿಂಗೇಗೌಡರಿಗೆ ಸಚಿವ ಸ್ಥಾನ ಸಿಕ್ಕೇ ಸಿಗುತ್ತದೆ ಎಂಬ ನಂಬಿಕೆ ನನಗಿದೆ. ಹೈಕಮಾಂಡ್ ತೆಗೆದುಕೊಳ್ಳುವ ಅಂತಿಮ ತೀರ್ಮಾನಕ್ಕೆ ನಾವು ಬದ್ಧರಾಗಿರುತ್ತೇವೆ ಎಂದು ಸ್ಪಷ್ಟಪಡಿಸಿದರು.

ಬಿ.ಕೆ.ಹರಿಪ್ರಸಾದ್ ನೇಮಕಕ್ಕೆ ಸಂತಸ: ಹಿರಿಯ ನಾಯಕ ಬಿ.ಕೆ.ಹರಿಪ್ರಸಾದ್ ಅವರು ಕೆಪಿಸಿಸಿ ನೂತನ ಅಧ್ಯಕ್ಷರಾಗಿ ನೇಮಕಗೊಂಡಿರುವುದಕ್ಕೆ ಶ್ರೇಯಸ್ ಪಟೇಲ್ ತೀವ್ರ ಹರ್ಷ ವ್ಯಕ್ತಪಡಿಸಿದರು. ಅವರು ನಮ್ಮ ಕುಟುಂಬಕ್ಕೆ ಅತ್ಯಂತ ಆತ್ಮೀಯರು ಹಾಗೂ ಹಿರಿಯರು. ನಮ್ಮ ತಾತ ಮತ್ತು ಅವರು ಒಟ್ಟಿಗೆ ರಾಜಕೀಯಕ್ಕೆ ಬಂದವರು. ವಿವಿಧ ರಾಜ್ಯಗಳ ಉಸ್ತುವಾರಿಯಾಗಿ ಸೇವೆ ಸಲ್ಲಿಸಿರುವ ಅವರ ಶ್ರಮ ಮತ್ತು ಹೋರಾಟವನ್ನು ಗುರುತಿಸಿ ವರಿಷ್ಠರು ಈ ಜವಾಬ್ದಾರಿ ನೀಡಿದ್ದಾರೆ.

ಪಕ್ಷದಲ್ಲಿ ಪ್ರಾಮಾಣಿಕವಾಗಿ ದುಡಿದವರನ್ನು ಯಾವತ್ತಾದರೂ ಗುರುತಿಸಲಾಗುತ್ತದೆ ಎಂಬುದಕ್ಕೆ ಇದೇ ಸಾಕ್ಷಿ. ಅವರ ಮಾರ್ಗದರ್ಶನ ಮತ್ತು ನಾಯಕತ್ವದಲ್ಲಿ ಮುಂದಿನ ಎಲ್ಲಾ ಚುನಾವಣೆಗಳಲ್ಲಿ ಕಾಂಗ್ರೆಸ್ ಭರ್ಜರಿ ಗೆಲುವು ಸಾಧಿಸಲಿದೆ ಎಂದರು.

ಸಚಿವ ಸಂಪುಟದಿಂದ ಕೆಲ ಹಿರಿಯ ಸಚಿವರನ್ನು ಕೈಬಿಟ್ಟಿರುವ ಬಗ್ಗೆ ಕೇಳಲಾದ ಪ್ರಶ್ನೆಗೆ ಜಾಣ್ಮೆಯ ಉತ್ತರ ನೀಡಿದ ಸಂಸದರು, ನಾನು ಕೇವಲ ಒಬ್ಬ ಸಂಸದ ಮತ್ತು ಪಕ್ಷದ ಸಾಮಾನ್ಯ ಕಾರ್ಯಕರ್ತ. ಸಚಿವರನ್ನು ಕೈಬಿಡುವುದು ಅಥವಾ ಸೇರಿಸಿಕೊಳ್ಳುವುದು ವರಿಷ್ಠರಿಗೆ, ನೂತನ ಮುಖ್ಯಮಂತ್ರಿಗಳಿಗೆ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಬಿಟ್ಟ ವಿಚಾರ.

ಈ ಬಗ್ಗೆ ನಾನು ಪ್ರತಿಕ್ರಿಯಿಸುವುದು ಸಮಂಜಸವಲ್ಲ ಎಂದು ಹೇಳುವ ಮೂಲಕ ವಿವಾದಗಳಿಂದ ಅಂತರ ಕಾಯ್ದುಕೊಂಡರು.

# ಚನ್ನಕೇಶವ ಸನ್ನಿಧಿಯಲ್ಲಿ ಸಿ.ಟಿ.ಆರ್ ಕುಟುಂಬದಿಂದ ಕಲ್ಯಾಣೋತ್ಸವ-ಪೂಜೆ


**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ವಿಶ್ವವಿಖ್ಯಾತ ಐತಿಹಾಸಿಕ ಚನ್ನಕೇಶವ ದೇವಸ್ಥಾನದಲ್ಲಿ ಎಂಎಲ್‌ಸಿ ಸಿ.ಟಿ. ರವಿ ಅವರು, ಕುಟುಂಬ ಸಮೇತ ಚೆನ್ನಿಗನಿಗೆ ವಿಶೇಷ ಕಲ್ಯಾಣೋತ್ಸವ ಪೂಜೆ ಸಲ್ಲಿಸಿ ಆಶೀರ್ವಾದ ಪಡೆದರು. ಧಾರ್ಮಿಕ ವಿಧಿ-ವಿಧಾನಗಳೊಂದಿಗೆ ನಡೆದ ಕಾರ್ಯಕ್ರಮದಲ್ಲಿ ಕುಟುಂಬ ಸದಸ್ಯರು, ಬಿಜೆಪಿ ಕಾರ್ಯಕರ್ತರು ಹಾಗೂ ನೂರಾರು ಭಕ್ತರು ಭಾಗವಹಿಸಿದ್ದರು.

ಪೂಜೆ ಬಳಿಕ ಮಾತನಾಡಿದ ಸಿ.ಟಿ. ರವಿ, ತಮ್ಮ ಅತ್ತೆ-ಮಾವ ಅವರ ವಿವಾಹದ 50ನೇ ವರ್ಷದ ಸುವರ್ಣ ಮಹೋತ್ಸವ ಹಾಗೂ ತಮ್ಮ ದಾಂಪತ್ಯ ಜೀವನದ 25ನೇ ವರ್ಷದ ಅಂಗವಾಗಿ ಈ ಕಾರ್ಯಕ್ರಮ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಪತ್ನಿಯ ಸಂಕಲ್ಪದಂತೆ ಲೋಕ ಕಲ್ಯಾಣ, ಸಮಾಜದ ಶಾಂತಿ ಹಾಗೂ ಸರ್ವರ ಒಳಿತಿಗಾಗಿ ಸ್ವಾಮಿ ಸನ್ನಿಧಿಯಲ್ಲಿ ಕಲ್ಯಾಣೋತ್ಸವ ನೆರವೇರಿಸಲಾಗಿದೆ ಎಂದರು.

ಸನಾತನ ಧರ್ಮದ ಮಹತ್ವ ವಿವರಿಸಿದ ಅವರು, ಸನಾತನ ಧರ್ಮವು ಕೇವಲ ಒಂದು ಧಾರ್ಮಿಕ ಆಚರಣೆಯಲ್ಲ, ಅದು ಮಾನವೀಯ ಮೌಲ್ಯಗಳು, ಸಹಬಾಳ್ವೆ ಮತ್ತು ವಿಶ್ವ ಕಲ್ಯಾಣದ ಸಂದೇಶ ಸಾರುವ ಜೀವನ ಪದ್ಧತಿಯಾಗಿದೆ ಎಂದು



ಹೇಳಿದರು. ವಸುದೈವ ಕುಟುಂಬಕಂ ಎಂಬ ತತ್ವದ ಮೂಲಕ ಇಡೀ ವಿಶ್ವವೇ ಒಂದು ಕುಟುಂಬ ಎಂಬ ಸಂದೇಶವನ್ನು ಸನಾತನ ಧರ್ಮ ಸಾರುತ್ತದೆ. ಜಾತಿ, ಮತ, ಭಾಷೆ ಹಾಗೂ ಗಡಿಗಳನ್ನು ಮೀರಿ ಎಲ್ಲರ ಕಲ್ಯಾಣವೇ ಇದರ ಉದ್ದೇಶವಾಗಿದೆ ಎಂದು ಅಭಿಪ್ರಾಯಪಟ್ಟರು.

ಸನಾತನ ಧರ್ಮ ಟೀಕಿಸುವವರಿಗೆ, ಇತಿಹಾಸದಲ್ಲಿ ಹಿರಣ್ಯಕಶ್ಯಪು ಅವರಂಥವರು ಧರ್ಮದ ವಿರುದ್ಧ ನಿಂತಿದ್ದರೂ, ಅವರ ಕುಟುಂಬದಲ್ಲೇ ಪ್ರಹ್ಲಾದನಂತಹ ಮಹಾಭಕ್ತರು ಜನಿಸಿ ಧರ್ಮದ ಮಹತ್ವವನ್ನು ಜಗತ್ತಿಗೆ ತೋರಿಸಿದ್ದಾರೆ ಎಂದು ಟಾಂಗ್ ನೀಡಿದರು. ಧರ್ಮವನ್ನು ವಿರೋಧಿಸುವವರ ನಡುವೆಯೂ ಭಗವಂತನ ಮಹಿಮೆ ಅರಿತು ಧರ್ಮದ ಮಾರ್ಗದಲ್ಲಿ ನಡೆಯುವ ವ್ಯಕ್ತಿಗಳು ಹುಟ್ಟುತ್ತಾರೆ. ಆದ್ದರಿಂದ ಸತ್ಯ ಮತ್ತು ಧರ್ಮದ ಜಯ ಯಾವಾಗಲೂ ಶಾಶ್ವತವಾಗಿರುತ್ತದೆ ಎಂದು ಹೇಳಿದರು.

ಹೊಸ ಸರ್ಕಾರಕ್ಕೆ ಕಿವಿಮಾತು: ರಾಜ್ಯ ರಾಜಕೀಯ ಬೆಳವಣಿಗೆ ಬಗ್ಗೆ ಮಾತನಾಡಿ, ಅಧಿಕಾರ ಯಾರಿಗೂ ಶಾಶ್ವತವಲ್ಲ. ಉತ್ತಮ ಆಡಳಿತ, ಅಭಿವೃದ್ಧಿ ಕಾರ್ಯಗಳು ಮತ್ತು ಜನಪರ ಯೋಜನೆಗಳ ಮೂಲಕ ಜನರ ಹೃದಯದಲ್ಲಿ ಶಾಶ್ವತ ಸ್ಥಾನ ಪಡೆಯಲು ಸಾಧ್ಯ ಎಂದು ಹೇಳಿದರು.

ನೂತನ ಸಿಎಂ-ಸಚಿವರು ರಾಜ್ಯದ ಅಭಿವೃದ್ಧಿ ಹಾಗೂ ಜನರ ಹಿತದೃಷ್ಟಿಯಿಂದ ಕಾರ್ಯನಿರ್ವಹಿಸಿದರೆ ವಿರೋಧ ಪಕ್ಷವಾಗಿ ಸಂಪೂರ್ಣ ಸಹಕಾರ ನೀಡುತ್ತೇವೆ.

ರಾಜ್ಯದ ಹಿತಾಸಕ್ತಿಗೆ ವಿರುದ್ಧ ವಾದ ಯಾವುದೇ ನಿರ್ಧಾರ ಕೈಗೊಂಡರೆ ಅದನ್ನು ಪ್ರಜಾಪ್ರಭುತ್ವದ ಚೌಕಟ್ಟಿನೊಳಗೆ ಬಲವಾಗಿ ವಿರೋಧಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ದೇವಸ್ಥಾನದ ಅರ್ಚಕ ಶ್ರೀನಿವಾಸ್ ಭಟ್, ನರಸಿಂಹಪ್ರಿಯ ಭಟ್, ಸಿ.ಟಿ. ರವಿ ಧರ್ಮಪತ್ನಿ ಪಲ್ಲವಿ ರವಿ, ಪುತ್ರರಾದ ಸಮರ್ಥ ಸೂರ್ಯ ಹಾಗೂ ಸಾತ್ವಿಕ್ ಸೂರ್ಯ, ಕುಟುಂಬ ಸದಸ್ಯರು, ದೇವಸ್ಥಾನದ ಇಒ ಯೋಗೇಶ್, ಬಿಜೆಪಿ ಮುಖಂಡರು, ಕಾರ್ಯಕರ್ತರು ಹಾಗೂ ಭಕ್ತರು ಉಪಸ್ಥಿತರಿದ್ದರು.

ಕಲ್ಯಾಣೋತ್ಸವ ಪೂಜೆ ಬಳಿಕ ಆಗಮಿಸಿದ್ದ ಎಲ್ಲಾ ಭಕ್ತರಿಗೆ ದೇವಸ್ಥಾನದ ವತಿಯಿಂದ ದಾಸೋಹ ವ್ಯವಸ್ಥೆ ಕಲ್ಪಿಸಲಾಗಿದ್ದು, ಭಕ್ತರು ಪ್ರಸಾದ ಸ್ವೀಕರಿಸಿ ಶ್ರೀ ಚೆನ್ನಕೇಶವ ಸ್ವಾಮಿಯ ದರ್ಶನ ಪಡೆದರು.

> ಇದೇ ವೇಳೆ ದೇಶಭಕ್ತಿ ಮತ್ತು ನಾಡಗೀತೆಗೆ ಗೌರವ ನೀಡುವುದು ಪ್ರತಿಯೊಬ್ಬ ಭಾರತೀಯನ ಕರ್ತವ್ಯ ಎಂದ ರವಿ, ನಮ್ಮ ಮಾತೃಭೂಮಿ, ರಾಷ್ಟ್ರಧ್ವಜ ಹಾಗೂ ನಾಡಗೀತೆಯ ಮಹತ್ವವನ್ನು ಅರಿತು ನಡೆದುಕೊಳ್ಳಬೇಕು. ಕೆಲವರಿಗೆ ಇದರ ಮಹತ್ವ ತಿಳಿಯದೇ ಇಂತಹ ಹೀನ ಕೃತ್ಯಗಳು ನಡೆಯುತ್ತಿವೆ. ಆದರೆ ಇಂತಹ ಘಟನೆಗಳಿಗೆ ಕಾಲವೇ ಸೂಕ್ತ ಉತ್ತರ ನೀಡುತ್ತದೆ ಎಂದು ಸಿ.ಟಿ. ರವಿ ಎಚ್ಚರಿಕೆ ನೀಡಿದರು.

# ಸಚಿವ ಖಂಡ್ರೆಗೆ ಅಭಿನಂದನೆ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಅಖಿಲ ಭಾರತ ವೀರಶೈವ-ಲಿಂಗಾಯತ ಮಹಾಸಭಾದ ರಾಷ್ಟ್ರೀಯ ಅಧ್ಯಕ್ಷರು ಹಾಗೂ ರಾಜ್ಯ ಸರ್ಕಾರದಲ್ಲಿ ಮತ್ತೊಮ್ಮೆ ಸಚಿವರಾಗಿರುವ ಈಶ್ವರ್ ಬಿ.ಖಂಡ್ರೆ ಅವರನ್ನು ಬೇಲೂರು ವೀರಶೈವ ಲಿಂಗಾಯತ ಮಹಾಸಭಾ ಮಹಿಳಾ ಘಟಕದ ವತಿಯಿಂದ ಆತ್ಮೀಯವಾಗಿ ಅಭಿನಂದಿಸಲಾಯಿತು.

ಜಗತ್ಪ್ರಸಿದ್ಧ ಬೇಲೂರಿನ ವೀರಶೈವ ಮಹಿಳಾ ಘಟಕದ ಅಧ್ಯಕ್ಷೆ ವಿಂಪು ಸಂತೋಷ್ ಅವರು ಸಚಿವರನ್ನು ಭೇಟಿಯಾಗಿ ಪುಷ್ಪಗುಚ್ಛ ನೀಡಿ ಗೌರವಿಸಿದರು. ಈ ವೇಳೆ ಈಶ್ವರ್ ಖಂಡ್ರೆ ಅವರ ಸುದೀರ್ಘ ರಾಜಕೀಯ ಅನುಭವ, ಜನಪರ ಆಡಳಿತ ಹಾಗೂ ಸಮಾಜಮುಖಿ ಸೇವೆಗಳನ್ನು ಶ್ಲಾಘಿಸಿದ ಅವರು, ರಾಜ್ಯದ ಸಮಗ್ರ ಅಭಿವೃದ್ಧಿಗೆ ಅವರ ನಾಯಕತ್ವ ಮಹತ್ವದ ಕೊಡುಗೆ ನೀಡಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

# ಜಾಗ-ಅನುದಾನ: ಡಿಸಿ ಭರವಸೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ ನಗರದ ಡಾ.ಬಿ.ಆರ್ ಅಂಬೇಡ್ಕರ್ ಹಾಗೂ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಸ್ಮಾರಕ ನಿರ್ಮಾಣ ಹಾಗೂ ಸಂಶೋಧನಾ ಕೇಂದ್ರಕ್ಕೆ ಹೆಚ್ಚುವರಿಯಾಗಿ 9 ಎಕರೆ ಜಾಗ ಹಾಗೂ 20 ಕೋಟಿ ಅನುದಾನ ಕೊಡುವುದಾಗಿ ಜಿಲ್ಲಾಧಿಕಾರಿ ಲತಾ ಕುಮಾರಿ ಭರವಸೆ ನೀಡಿದ್ದಾರೆ.

ಅಂಬೇಡ್ಕರ್ ಹಾಗೂ ನಾಲ್ವಡಿ ಕೃಷ್ಣರಾಜ ಒಡೆಯರ್ ಸ್ಮಾರಕ ಮತ್ತು ಸಂಗ್ರಹಾಲಯ ಮತ್ತು ಸಂಶೋಧನಾ ಕೇಂದ್ರ, ಹೋರಾಟ ಸಮಿತಿ ಡಿಸಿ ಅವರ ಮೂಲಕ ಸರ್ಕಾರಕ್ಕೆ ಮನವಿ ಮಾಡಿತ್ತು. ಇಂದು ಕೇಂದ್ರಕ್ಕೆ ಭೇಟಿ ನೀಡಿದ್ದ ಡಿಸಿ




ಅವರು, ಜಾಗ-ಅನುದಾನದ ಭರವಸೆ ನೀಡಿದರು.

ಈ ವೇಳೆ ಹೋರಾಟ ಸಮಿತಿ ಸಂಸ್ಥಾಪಕ ಅಧ್ಯಕ್ಷ ಶ್ರೀಧರ ಕಲಿವೀರ, ಸಮಾಜ ಕಲ್ಯಾಣ ಇಲಾಖೆ ಉಪ ನಿರ್ದೇಶಕ ದೂದ್‌ಪೀರ್, ತಾಲ್ಲೂಕು ಸಮಾಜ ಕಲ್ಯಾಣ ಇಲಾಖೆಯ ಮನುಕುಮಾರ್ ಸೇರಿದಂತೆ ಹೋರಾಟ ಸಮಿತಿಯ ಹಿರಿಯ ಸದಸ್ಯರು ಹಾಗೂ ಜಿಲ್ಲೆಯ ಎಲ್ಲಾ ಹಿರಿಯ, ಕಿರಿಯ ದಲಿತ ಮುಖಂಡರು ಹಾಜರಿದ್ದು ಸಭೆ ಯಶಸ್ವಿಗೊಳಿಸಿದರು.

# ಬಿಳಿಸುಳಿ ರೋಗಮುಕ್ತ ಬಿತ್ತನೆ ಬೀಜ ಮಾರಾಟಕ್ಕೆ ಸೂಚನೆ

## ರಸಗೊಬ್ಬರ ಕಾಳಸಂತೆಕೋರರ ವಿರುದ್ಧ ಕಠಿಣ ಕ್ರಮ: ಸಂಸದ ಶ್ರೇಯಸ್ ಪಟೇಲ್




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ರೈತರಿಗೆ ಗುಣಮಟ್ಟದ ಬಿತ್ತನೆ ಬೀಜ ಮತ್ತು ರಸಗೊಬ್ಬರಗಳು ಸಕಾಲದಲ್ಲಿ ಲಭ್ಯವಾಗುವಂತೆ ಅಧಿಕಾರಿಗಳು ಹಾಗೂ ಸರಬರಾಜುದಾರರು ಅಗತ್ಯ ಕ್ರಮ ಕೈಗೊಳ್ಳಬೇಕು. ಕಳಪೆ ಗುಣಮಟ್ಟದ ಬಿತ್ತನೆ ಬೀಜ ಮಾರಾಟ ಮತ್ತು ರಸಗೊಬ್ಬರಗಳ ಕಾಳಸಂತೆ ಕಂಡುಬಂದರೆ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಹಾಸನ ಲೋಕಸಭಾ ಕ್ಷೇತ್ರದ ಸಂಸದ ಶ್ರೇಯಸ್ ಎಂ. ಪಟೇಲ್ ಎಚ್ಚರಿಕೆ ನೀಡಿದರು.

ನಗರದಲ್ಲಿ ಗುರುವಾರ ನಡೆದ ಮುಂಗಾರು ಹಂಗಾಮಿಗೆ ಅಗತ್ಯವಿರುವ ರಸಗೊಬ್ಬರ ಹಾಗೂ ಬಿತ್ತನೆ ಬೀಜಗಳ ಲಭ್ಯತೆ ಮತ್ತು ವಿತರಣೆಗೆ ಸಂಬಂಧಿಸಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಳೆದ ಸಾಲಿನಲ್ಲಿ ಮುಸುಕಿನ ಜೋಳದಲ್ಲಿ ಬಿಳಿಸುಳಿ ರೋಗ ಹಾಗೂ ಆಲೂಗಡ್ಡೆ ಬೆಳೆಯಲ್ಲಿ ರೋಗ ಕಾಣಿಸಿಕೊಂಡು ರೈತರು ತೀವ್ರ ನಷ್ಟ ಅನುಭವಿಸಿದ್ದರು. ಈ ಹಿನ್ನೆಲೆಯಲ್ಲಿ ಮಂಡ್ಯ ಕೃಷಿ ವಿಶ್ವವಿದ್ಯಾನಿಲಯದಲ್ಲಿ ಪರೀಕ್ಷೆಗೊಳಗಾಗಿ 'ಬಿಳಿಸುಳಿ ರೋಗಮುಕ್ತ' ಎಂದು ಪ್ರಮಾಣೀಕರಿಸಲ್ಪಟ್ಟ ಮುಸುಕಿನ ಜೋಳದ ಬಿತ್ತನೆ ಬೀಜಗಳನ್ನು ಮಾತ್ರ ಮಾರಾಟ ಮಾಡಬೇಕು ಎಂದು ಖಾಸಗಿ ಡೀಲರ್‌ಗಳು ಹಾಗೂ ರೈತ ಸಂಪರ್ಕ ಕೇಂದ್ರಗಳಿಗೆ ಸೂಚನೆ ನೀಡಿದರು.

ಬೀಜ ಖರೀದಿಸುವ ರೈತರಿಗೆ ಕಡ್ಡಾಯವಾಗಿ ಬಿತ್ತನೆ ಬೀಜದ ಹೆಸರು ಹಾಗೂ ಲಾಟ್ ನಂಬರ್ ನಮೂದಿಸಿರುವ ಬಿಲ್ ನೀಡಬೇಕು. ಜೊತೆಗೆ ಬಿಳಿಸುಳಿ ರೋಗ ನಿಯಂತ್ರಣಕ್ಕೆ ಅಗತ್ಯವಿರುವ ರಾಸಾಯನಿಕಗಳನ್ನು ರೈತ ಸಂಪರ್ಕ ಕೇಂದ್ರಗಳಲ್ಲಿ ಸಮರ್ಪಕ ಪ್ರಮಾಣದಲ್ಲಿ ದಾಸ್ತಾನು ಇಟ್ಟುಕೊಳ್ಳುವಂತೆ ನಿರ್ದೇಶಿಸಿದರು.

ಸಭೆಯಲ್ಲಿ ಮಾತನಾಡಿದ ಜಂಟಿ ಕೃಷಿ ನಿರ್ದೇಶಕರು, ಜಿಲ್ಲೆಯಲ್ಲಿ ಮುಂಗಾರು ಹಂಗಾಮಿಗೆ ಒಟ್ಟು 1,64,187 ಮೆಟ್ರಿಕ್ ಟನ್ ರಸಗೊಬ್ಬರದ ಬೇಡಿಕೆಯಿದ್ದು, ಪ್ರಸ್ತುತ 54,809 ಮೆಟ್ರಿಕ್ ಟನ್ ದಾಸ್ತಾನು ಲಭ್ಯವಿರುವುದರಿಂದ ಯಾವುದೇ ಕೊರತೆಯಿಲ್ಲ ಎಂದು ಮಾಹಿತಿ ನೀಡಿದರು.

ಕೃಷಿ ಪರಿಕರಗಳನ್ನು ನಿಗದಿತ ಮುಖಬೆಲೆಗಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡಿದರೆ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸಂಸದರು ಎಚ್ಚರಿಸಿದರು. ಯೂರಿಯಾ ಖರೀದಿಗೆ ಎಫ್.ಐ.ಡಿ ಕಡ್ಡಾಯಗೊಳಿಸಲಾಗಿದ್ದು, ಕಾಳಸಂತೆ ಮಾರಾಟಕ್ಕೆ ಕಡಿವಾಣ ಹಾಕಲು ಕ್ರಮ ಕೈಗೊಳ್ಳಲಾಗಿದೆ ಎಂದರು.

ಎಲ್ಲಾ ಖಾಸಗಿ ಡೀಲರ್‌ಗಳು ಹಾಗೂ ರೈತ ಸಂಪರ್ಕ ಕೇಂದ್ರಗಳಲ್ಲಿ ಕಡ್ಡಾಯವಾಗಿ ದಾಸ್ತಾನು ಫಲಕ ಮತ್ತು ದರಪಟ್ಟಿಯನ್ನು ಪ್ರದರ್ಶಿಸಬೇಕು ಎಂದು ಸೂಚಿಸಿದರು.

ಈ ವರ್ಷ ಜಿಲ್ಲೆಯಲ್ಲಿ ಮುಂಗಾರು ಮಳೆಯು ಶೇ.19ರಷ್ಟು ಕೊರತೆಯಾಗಿದ್ದು, ಕಳೆದ ವರ್ಷ ಇದೇ ಅವಧಿಯಲ್ಲಿ 80 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆಯಾಗಿದ್ದರೆ, ಈ ಬಾರಿ ಕೇವಲ 15 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಮಾತ್ರ ಬಿತ್ತನೆಯಾಗಿದೆ. ಹೀಗಾಗಿ ಮಳೆ ಕೊರತೆಯ ಪರಿಸ್ಥಿತಿಯಲ್ಲಿ ಬೆಳೆಯಬಹುದಾದ ಪರ್ಯಾಯ ಬೆಳೆಗಳ ಕುರಿತು ರೈತರಿಗೆ ಸೂಕ್ತ ಮಾಹಿತಿ ನೀಡಬೇಕು ಎಂದು ಕೃಷಿ ಇಲಾಖೆ ಅಧಿಕಾರಿಗಳಿಗೆ ತಿಳಿಸಿದರು.

ಬೆಳೆ ವಿಮೆ ಅಧಿಸೂಚನೆ ಪ್ರಕಟವಾದ ಕೂಡಲೇ ಪತ್ರಿಕಾ ಪ್ರಕಟಣೆ ನೀಡಿ ಹೆಚ್ಚಿನ ರೈತರು ವಿಮೆ ಯೋಜನೆಯ ಸೌಲಭ್ಯ ಪಡೆಯುವಂತೆ ಕ್ರಮವಹಿಸಬೇಕು. ರೈತ ಸಂಪರ್ಕ ಕೇಂದ್ರಗಳಿಗೆ ಬರುವ ರೈತರೊಂದಿಗೆ ಅಧಿಕಾರಿಗಳು ತಾಳ್ಮೆಯಿಂದ ವರ್ತಿಸಿ, ಅವರಿಗೆ ಅಗತ್ಯ ತಾಂತ್ರಿಕ ಮಾಹಿತಿ ಮತ್ತು ಕೃಷಿ ಪರಿಕರಗಳನ್ನು ಒದಗಿಸಬೇಕು ಎಂದು ಸೂಚಿಸಿದರು.

ಯೂರಿಯಾ ಬಳಕೆಯ ಬದಲಾಗಿ ನ್ಯಾನೋ ಯೂರಿಯಾ ಬಳಕೆಗೆ ಉತ್ತೇಜನ ನೀಡುವಂತೆ ಅಧಿಕಾರಿಗಳಿಗೆ ಸಲಹೆ ನೀಡಿದ ಅವರು, ಆಗಸ್ಟ್ ಅಂತ್ಯದವರೆಗೂ ಕೃಷಿ ಚಟುವಟಿಕೆಗಳು ತೀವ್ರಗೊಳ್ಳುವ ಹಿನ್ನೆಲೆಯಲ್ಲಿ ಅಧಿಕಾರಿಗಳು ಹೆಚ್ಚಿನ ದಕ್ಷತೆಯಿಂದ ಕಾರ್ಯನಿರ್ವಹಿಸಿ ರೈತರಿಗೆ ಸಕಾಲದಲ್ಲಿ ಸೇವೆ ಒದಗಿಸಬೇಕು ಎಂದು ತಿಳಿಸಿದರು.

ರೈತರ ಹಿತಾಸಕ್ತಿಗೆ ಧಕ್ಕೆಯಾಗುವ ಯಾವುದೇ ಅಹಿತಕರ ಘಟನೆಗಳು ನಡೆದರೆ ಜಿಲ್ಲಾಡಳಿತವು ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಹಿಂಜರಿಯುವುದಿಲ್ಲ ಎಂದು ಸಭೆಯಲ್ಲಿ ಎಚ್ಚರಿಕೆ ನೀಡಲಾಯಿತು.

# ಆರೋಗ್ಯ ಸೇವೆಗಳ ಗುಣಮಟ್ಟ ಹೆಚ್ಚಿಸಲು ಒತ್ತು: ಸಂಸದ ಶ್ರೇಯಸ್ ಪಟೇಲ್



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಗರ್ಭಿಣಿಯರು, ಮಕ್ಕಳು, ಹಿರಿಯ ನಾಗರಿಕರು ಹಾಗೂ ಆರ್ಥಿಕವಾಗಿ ಹಿಂದುಳಿದ ವರ್ಗದ ಜನರಿಗೆ ಅಗತ್ಯ ಆರೋಗ್ಯ ಸೌಲಭ್ಯಗಳನ್ನು ಆದ್ಯತೆಯ ಮೇರೆಗೆ ಒದಗಿಸುವಂತೆ ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಹಾಸನ ಲೋಕಸಭಾ ಕ್ಷೇತ್ರದ ಸಂಸದ ಶ್ರೇಯಸ್ ಎಂ. ಪಟೇಲ್ ನಿರ್ದೇಶನ ನೀಡಿದರು.

ನಗರದ ಜಿಲ್ಲಾ ಆರೋಗ್ಯಾಧಿಕಾರಿಗಳ ಕಚೇರಿಯಲ್ಲಿ ನಡೆದ ಆರೋಗ್ಯ ಇಲಾಖೆಯ ವಿವಿಧ ಯೋಜನೆಗಳು ಹಾಗೂ ಕಾರ್ಯಕ್ರಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಜನತೆಗೆ ಗುಣಮಟ್ಟದ ಹಾಗೂ ಸಮಯೋಚಿತ ಆರೋಗ್ಯ ಸೇವೆಗಳನ್ನು ತಲುಪಿಸುವುದು ಸರ್ಕಾರದ ಪ್ರಮುಖ ಆದ್ಯತೆಯಾಗಿದ್ದು, ಆರೋಗ್ಯ ಸೇವೆಗಳ ವಿತರಣೆಯಲ್ಲಿ ಯಾವುದೇ ರೀತಿಯ ಲೋಪಗಳು ಕಂಡುಬರದಂತೆ ಅಧಿಕಾರಿಗಳು ಹೆಚ್ಚಿನ ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು. ಗ್ರಾಮೀಣ ಮತ್ತು ನಗರ ಪ್ರದೇಶಗಳಲ್ಲಿನ ಸಾರ್ವಜನಿಕರಿಗೆ ಆರೋಗ್ಯ ಸೇವೆಗಳು ಸುಲಭವಾಗಿ ಲಭ್ಯವಾಗುವಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ತಿಳಿಸಿದರು.

ಸಭೆಯಲ್ಲಿ ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಸಮುದಾಯ ಆರೋಗ್ಯ ಕೇಂದ್ರಗಳು ಹಾಗೂ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವಿವಿಧ ಯೋಜನೆಗಳ ಅನುಷ್ಠಾನದ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದು ಪರಿಶೀಲಿಸಲಾಯಿತು. ತಾಯಿ ಮತ್ತು ಶಿಶು ಆರೋಗ್ಯ, ಲಸಿಕಾ ಕಾರ್ಯಕ್ರಮ, ಸಾಂಕ್ರಾಮಿಕ ಹಾಗೂ ಅಸಾಂಕ್ರಾಮಿಕ ರೋಗಗಳ ನಿಯಂತ್ರಣ, ತುರ್ತು ವೈದ್ಯಕೀಯ ಸೇವೆಗಳು, ವೈದ್ಯರು ಹಾಗೂ ಸಿಬ್ಬಂದಿಗಳ ಲಭ್ಯತೆ ಸೇರಿದಂತೆ ಹಲವು ಪ್ರಮುಖ ವಿಷಯಗಳ ಕುರಿತು ಚರ್ಚೆ ನಡೆಯಿತು.

ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರು, ನರ್ಸಿಂಗ್ ಸಿಬ್ಬಂದಿ ಹಾಗೂ ಅಗತ್ಯ ಔಷಧಿಗಳ ಲಭ್ಯತೆಯನ್ನು ಖಚಿತಪಡಿಸಿಕೊಳ್ಳುವ ಜೊತೆಗೆ ಆಸ್ಪತ್ರೆಗಳ ಸ್ವಚ್ಛತೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ರೋಗಿ ಸ್ನೇಹಿ ವಾತಾವರಣ ನಿರ್ಮಾಣಕ್ಕೆ ಹೆಚ್ಚಿನ ಆದ್ಯತೆ ನೀಡುವಂತೆ ಸಂಸದರು ಸೂಚಿಸಿದರು.

ಮುಂಗಾರು ಹಿನ್ನೆಲೆಯಲ್ಲಿ ಡೆಂಗ್ಯೂ, ಮಲೇರಿಯಾ ಸೇರಿದಂತೆ ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಬೇಕು. ಸಾರ್ವಜನಿಕರಲ್ಲಿ ಆರೋಗ್ಯ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ರೋಗಗಳ ಹರಡುವಿಕೆಯನ್ನು ತಡೆಯಲು ಪರಿಣಾಮಕಾರಿ ಕ್ರಮಗಳನ್ನು ಜಾರಿಗೊಳಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಆರೋಗ್ಯ ಇಲಾಖೆಯ ವಿವಿಧ ಯೋಜನೆಗಳ ಅನುಷ್ಠಾನ ಪ್ರಗತಿ, ಲಭ್ಯವಿರುವ ಸೌಲಭ್ಯಗಳು ಹಾಗೂ ಇಲಾಖೆ ಎದುರಿಸುತ್ತಿರುವ ಸವಾಲುಗಳ ಕುರಿತು ಅಧಿಕಾರಿಗಳೊಂದಿಗೆ ಸಮಗ್ರ ಚರ್ಚೆ ನಡೆಸಲಾಯಿತು. ಆರೋಗ್ಯ ಸೇವೆಗಳ ಗುಣಮಟ್ಟವನ್ನು ಮತ್ತಷ್ಟು ಹೆಚ್ಚಿಸಲು ಅಗತ್ಯ ಮಾರ್ಗದರ್ಶನ ಮತ್ತು ಸೂಚನೆಗಳನ್ನು ನೀಡಲಾಯಿತು.

''ಆರೋಗ್ಯಕರ ಹಾಸನ ಜಿಲ್ಲೆಯ ನಿರ್ಮಾಣ ನಮ್ಮ ಗುರಿಯಾಗಿದೆ. ಜಿಲ್ಲೆಯ ಪ್ರತಿಯೊಬ್ಬ ನಾಗರಿಕರಿಗೂ ಗುಣಮಟ್ಟದ ಹಾಗೂ ಸುಲಭವಾಗಿ ಲಭ್ಯವಾಗುವ ಆರೋಗ್ಯ ಸೇವೆಗಳನ್ನು ಒದಗಿಸಲು ಎಲ್ಲಾ ಇಲಾಖೆಗಳ ಸಮನ್ವಯದೊಂದಿಗೆ ಕಾರ್ಯನಿರ್ವಹಿಸಲು ಬದ್ಧರಾಗಿದ್ದೇವೆ'' ಎಂದು ಸಂಸದ ಶ್ರೇಯಸ್ ಎಂ. ಪಟೇಲ್ ಹೇಳಿದರು.

# ಆಧುನಿಕ ಕರ್ನಾಟಕದ ಶಿಲ್ಪಿಗೆ ಸರ್ಕಾರದ ನಿರ್ಲಕ್ಷ್ಯ ಯಾಕೆ?

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಮೈಸೂರು ಸಂಸ್ಥಾನದ ಅಭಿವೃದ್ಧಿ ಹಾಗೂ ಸಾಮಾಜಿಕ ನ್ಯಾಯದ ಹರಿಕಾರರಾದ ನಾಲ್ವಡಿ ಕೃಷ್ಣರಾಜ ಒಡೆಯರ್ ಅವರ ಜಯಂತಿಯನ್ನು ಸರಕಾರದಿಂದಲೇ ಆಚರಿಸುವಂತಾಗಬೇಕು ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ಪಟ್ಟಣದ ಬಾಲಕಿಯರ ಸರ್ಕಾರಿ ಪ್ರೌಢಶಾಲೆಯಲ್ಲಿ ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಘಟಕದ ವತಿಯಿಂದ ಗುರುವಾರ ಆಯೋಜಿಸಿದ್ದ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ 142ನೇ ಜಯಂತೋತ್ಸವ ಕಾರ್ಯಕ್ರಮದಲ್ಲಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿ, ನಾಲ್ವಡಿ ಕೃಷ್ಣರಾಜ ಒಡೆಯರು ಕೇವಲ ಮೈಸೂರಿಗೆ ಸೀಮಿತವಾಗಿರಲಿಲ್ಲ ಎಂದರು.

ಇಡೀ ಕರ್ನಾಟಕದ ಅಭಿವೃದ್ಧಿಗೆ ಅಡಿಪಾಯ ಹಾಕಿದ ದೂರದೃಷ್ಟಿಯ ರಾಜರಾಗಿದ್ದು ಅವರ ಹೆಸರು ಮುಂದಿನ ಪೀಳಿಗೆಯಲ್ಲೂ ಚಿರಸ್ಥಾಯಿಯಾಗಿ ಉಳಿಯುವಂತೆ ಸರಕಾರ ಕಾರ? ಯಕ್ರಮ ರೂಪಿಸಬೇಕು. ಸ್ವಾತಂತ್ರ್ಯ ಪೂರ್ವದಲ್ಲಿಯೇ ಸಾಮಾಜಿಕ ನ್ಯಾಯದ ಅನುಷ್ಠಾನಕ್ಕಾಗಿ ರಾಜಾಡಳಿತದಲ್ಲಿಯೇ ಪ್ರಜಾಡಳಿತ ಜಾರಿ ಮಾಡಿ ಹಿಂದುಳಿದವರಿಗೆ ಮೀಸಲಾತಿ ನೀಡುವ ಮೂಲಕ ಸಾಮಾಜಿಕ ನ್ಯಾಯ ಜಾರಿಗೆ ತಂದು, ದೇವದಾಸಿಯತಂಹ ಸಾಮಾಜಿಕ ಅನಿಷ್ಟ ಪದ್ಧತಿಗಳನ್ನು ರದ್ದುಗೊಳಿಸಿ, ಮೈಸೂರು ವಿಶ್ವವಿದ್ಯಾಲಯ ಸ್ಥಾಪನೆ ಮಾಡಿ ಶಿಕ್ಷಣಕ್ಕೆ ಆದ್ಯತೆ ನೀಡಿದ್ದರು ಎಂದು ತಿಳಿಸಿದರು.



ಏಷ್ಯಾ ಖಂಡದಲ್ಲಿಯೇ ಮೊದಲಿಗೆ ಜಲ ವಿದ್ಯುತ್ ಉತ್ಪಾದನೆ ಮಾಡಿ ನಾಡನ್ನು ಬೆಳಗಿಸಿ ಆಧುನಿಕ ಕೈಗಾರಿಕೆಗಳನ್ನು ಸ್ಥಾಪಿಸಿ ಉದ್ಯೋಗ ಸೃಷ್ಟಿಸಿ ಮೈಸೂರು ಸಂಸ್ಥಾನವನ್ನು ಮಾದರಿ ಸಂಸ್ಥಾನವಾಗಿ ರೂಪಿಸಿದ್ದಾರೆ, ಇತಂಹ ಮಹನೀಯರ ಜಯಂತಿ ಆಚರಣೆಗೆ ಸರ್ಕಾರದ ಉದಾಸೀನ ಧೋರಣೆ ಸರಿಯಲ್ಲ, ವಿಶ್ವಕ್ಕೆ ಮಾದರಿ ಆಡಳಿತ ನೀಡಿ, ಆಧುನಿಕ ಮೈಸೂರಿನ ನಿರ್ಮಾತೃ ಎಂದೇ ಕರೆಯಲ್ಪಡುವ ಇವರ ಜಯಂತಿಯನ್ನು ರಾಜ್ಯದಾದ್ಯಂತ ಸರ್ಕಾರದ ವತಿಯಿಂದ ಅದ್ಧೂರಿಯಾಗಿ ಆಚರಿಸಬೇಕು ಜಯಂತಿ ಆಚರಣೆಗೆ ಸಂಬಂಧಿಸಿದಂತೆ ಸದನದಲ್ಲಿ ಅಧಿವೇಶನದ ವೇಳೆ ಧ್ವನಿ ಎತ್ತಿ ಸರ್ಕಾರದ ಗಮನ ತಿಳಿಸಲಾಗುವುದು ಎಂದು ತಿಳಿಸಿದರು.

ನಾಲ್ವಡಿಯವರ ಕೊಡುಗೆಗಳ ಬಗ್ಗೆ ವಿಶೇಷ ಉಪನ್ಯಾಸ ನೀಡಿದ ನರ್ಮೋದಯ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಮಂಜಪ್ಪ, ನಾಲ್ವಡಿ ಕೃಷ್ಣರಾಜ ಒಡೆಯರ 39 ವರ್ಷಗಳ ಆಳ್ವಿಕೆ ಮೈಸೂರು ರಾಜ್ಯವನ್ನು ಪ್ರಗತಿಪರ, ಸ್ವಾವಲಂಬಿ ಮಾಡಿತು. ಶಿಕ್ಷಣಕ್ಕೆ ಆದ್ಯತೆ ನೀಡಿದ್ದು, ಪ್ರಾಥಮಿಕ ಶಿಕ್ಷಣವನ್ನು ಕಡ್ಡಾಯಗೊಳಿಸಿದರು

ಆಧುನಿಕ ಮೈಸೂರಿನ ನೈಜ ನಿರ್ಮಾತೃ, ನಾಲ್ವಡಿಯವರ ದೂರದೃಷ್ಟಿ ಮೈಸೂರನ್ನು ನಾವೀನ್ಯತೆಯ ತಾಣವನ್ನಾಗಿ ರೂಪಿಸಿತು. 1902ರಲ್ಲಿ, ಶಿವನಸಮುದ್ರ ಜಲಪಾತ ಯೋಜನೆಯ ಮೂಲಕ, ಮೈಸೂರು ಜಲ ವಿದ್ಯುತ್ ಉತ್ಪಾದಿಸುವ ಭಾರತದ ಮೊದಲ ರಾಜ್ಯ ಎಂಬ ಹೆಗ್ಗಳಿಕೆಗೆ ಪಾತ್ರವಾಯಿತು. ಆ ಮೂಲಕ, 1905ರಲ್ಲಿ ಬೆಂಗಳೂರು ವಿದ್ಯುತ್ ಬೀದಿ ದೀಪಗಳನ್ನು ಹೊಂದಿರುವ ಏಷ್ಯಾದ ಮೊದಲ ನಗರ ಎಂಬ ಕೀರ್ತಿ ಪಡೆಯಿತು ಎಂದು ಶ್ಲಾಘಿಸಿದರು.

1911ರಿಂದ 1932ರ ನಡುವೆ ನಿರ್ಮಾಣಗೊಂಡ ಕೃಷ್ಣರಾಜ ಸಾಗರ ಅಣೆಕಟ್ಟು ಆ ಸಮಯದಲ್ಲಿ ಏಷ್ಯಾದ ಅತಿದೊಡ್ಡ ಅಣೆಕಟ್ಟಾಗಿದ್ದು, ಇಂದಿಗೂ ಅಪಾರ ಪ್ರಮಾಣದ ಭೂಮಿಗೆ ನೀರಾವರಿ ಒದಗಿಸಿ, ಹಾಸನ, ಮೈಸೂರು ಮತ್ತು ಮಂಡ್ಯ ಜಿಲ್ಲೆಗಳ ರೈತರ ಜೀವನಾಡಿಯಾಗಿದೆ.

ಅವರು ಪ್ರಮುಖ ಉದ್ಯಮಗಳಿಗೂ ಚಾಲನೆ ನೀಡಿದ್ದು, ಮೈಸೂರು ಪೇಪರ್ ಮಿಲ್ಸ್, ಭದ್ರಾವತಿ ಕಬ್ಬಿಣ ಮತ್ತು ಉಕ್ಕಿನ ಕಾರ್ಖಾನೆ, ಮೈಸೂರು ಸ್ಯಾಂಡಲ್ ಸೋಪ್ ಕಾರ್ಖಾನೆ ಸ್ಥಾಪಿಸಿ ಕೈಗಾರಿಕಾ ಕ್ಷೇತ್ರಕ್ಕೆ ಅಪಾರ ಕೊಡುಗೆಗಳನ್ನು ನೀಡಿದ್ದಾರೆ. ಅವರ ದೂರದೃಷ್ಟಿ ಮತ್ತು ದಿಟ್ಟ ನಿರ್ಧಾರಗಳಿಂದಾಗಿ ಮೈಸೂರು ರಾಜ್ಯವು 'ಮಾದರಿ ಕೈಗಾರಿಕಾ ರಾಜ್ಯ'ವಾಗಿ ರೂಪುಗೊಂಡಿತು. ಅವರ ಆಡಳಿತಾವಧಿಯ ಬಗ್ಗೆ ಇನ್ನಷ್ಟು ಆಳವಾಗಿ ತಿಳಿದುಕೊಳ್ಳಲು ನಾಲ್ವಡಿ ಕೃಷ್ಣರಾಜ ಒಡೆಯರ ಜೀವನ ಚರಿತ್ರೆಯನ್ನು ಓದಬೇಕು ಎಂದರು.

ಕನ್ನಡ ಸಾಹಿತ್ಯ ಪರಿಷತ್ತಿನ ತಾಲ್ಲೂಕು ಅಧ್ಯಕ್ಷ ಹಡೇನಹಳ್ಳಿ ಲೋಕೇಶ್ ಪ್ರಾಸ್ತಾವಿಕ ನುಡಿಗಳನಾಡಿ, ನಾಡಿಗೆ ನಾಲ್ವಡಿ ಕೃಷ್ಣರಾಜ ಒಡೆಯರ ಕೊಡುಗೆಗಳು ನಿಜಕ್ಕೂ ಅಪಾರ. ಅವರ ಆಳ್ವಿಕೆಯ ಕಾಲವನ್ನು "ಮೈಸೂರು ಸಂಸ್ಥಾನದ ಸುವರ್ಣಯುಗ" ಎಂದು ಕರೆಯಲಾಗುತ್ತದೆ.


ಅವರ ಜನಪರ ಆಡಳಿತ ಮತ್ತು ದೂರದೃಷ್ಟಿಯ ಯೋಜನೆಗಳು ನಾಡಿನ ಸರ್ವಾಂಗೀಣ ಅಭಿವೃದ್ಧಿಗೆ ಬುನಾದಿಯಾದವು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಇತ್ತೀಚೆಗೆ ಶಿಕ್ಷಣ ಇಲಾಖೆಯಲ್ಲಿ ಸೇವೆ ಸಲ್ಲಿಸಿ ನಿವೃತ್ತಿಯಾದ ಸಿ.ಕೃಷ್ಣೇಗೌಡ ಹಾಗೂ ಶಿವನಗೌಡ ಪಾಟೀಲ್ ಅವರನ್ನು ಗೌರವಿಸಲಾಯಿತು, ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಆಯೋಜಿಸಲಾಗಿದ್ದ ನಾಲ್ವಡಿ ಕೃಷ್ಣರಾಜರ ಕುರಿತು ಪ್ರಬಂಧ ಸ್ಪರ್ಧೆಯಲ್ಲಿ ವಿಜೇತರಾದ ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಸರ್ಕಾರಿ ಬಾಲಕಿಯರ ಪ್ರೌಢಶಾಲೆಯ ಮುಖ್ಯೋಪಾಧ್ಯಾಯ ಬಿ.ಆರ್.ರಮೇಶ್, ಕನ್ನಡ ಸಾಹಿತ್ಯ ಪರಿಷತ್ತಿನ ತಾಲೂಕು ಘಟಕದ ಪದಾಧಿಕಾರಿಗಳಾದ ಮುಳ್ಳುಕೆರೆ ಪ್ರಕಾಶ್, ಜಬಿವುಲ್ಲಾ ಬೇಗ್, ದಿಂಡಗೂರು ಗೋವಿಂದರಾಜು, ಯಶೋಧ ಜೈನ್, ಮಮತಾ ಸೇರಿದಂತೆ ಶಾಲಾ ಶಿಕ್ಷಕ ವೃಂದ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಹಳೇಬೀಡು ಅನಿಲ್‌ಗೆ ಸೇವಾ ರತ್ನ ಪ್ರಶಸ್ತಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಬೇಲೂರು : ಹೊಯ್ಸಳರ ನಾಡಿನ ಗೆಳೆಯರ ಬಳಗದಿಂದ ಹಳೇಬೀಡಿನ ಪ್ರಜಾವಾಣಿ ವರದಿಗಾರ ಎಚ್.ಎಸ್. ಅನಿಲ್ ಕುಮಾರ್ ಅವರನ್ನು ಪ್ರತಿಷ್ಠಿತ "ಮಾಧ್ಯಮ ಸೇವಾ ರತ್ನ" ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ.

ವಿಶ್ವ ಪರಿಸರ ದಿನಾಚರಣೆ ಹಾಗೂ ಆರೋಗ್ಯ ಜಾಗೃತಿ ಕಾರ್ಯಕ್ರಮದ ಅಂಗವಾಗಿ ಜೂನ್ 5ರಂದು ಹಳೇಬೀಡಿನ ಕರ್ನಾಟಕ ಪಬ್ಲಿಕ್ ಶಾಲೆಯ ಸಭಾಂಗಣದಲ್ಲಿ ನಡೆಯುವ ಸಮಾರಂಭದಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಗೌರವಿಸಲಾಗುವುದು.

ಪತ್ರಿಕೋದ್ಯಮ ಕ್ಷೇತ್ರದಲ್ಲಿ ನಿಷ್ಠೆ, ಪ್ರಾಮಾಣಿಕತೆ ಹಾಗೂ ಬದ್ಧತೆಯಿಂದ ಸೇವೆ ಸಲ್ಲಿಸುತ್ತಿರುವ ಎಚ್.ಎಸ್. ಅನಿಲ್ ಕುಮಾರ್ ಅವರು ತಮ್ಮ ವಿಶೇಷ ಲೇಖನಗಳು ಮತ್ತು ವಸ್ತುನಿಷ್ಠ ವರದಿಗಳ ಮೂಲಕ ಓದುಗರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಅವರ ಪತ್ರಿಕಾ ಸೇವೆಯನ್ನು ಗುರುತಿಸಿ ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿದೆ ಎಂದು ಸಂಘಟಕರು ತಿಳಿಸಿದ್ದಾರೆ.

ಎಚ್.ಎಸ್. ಅನಿಲ್ ಕುಮಾರ್ ಅವರಿಗೆ ಈ ಗೌರವ ಲಭಿಸಿರುವ ಹಿನ್ನೆಲೆಯಲ್ಲಿ ಬೇಲೂರು ತಾಲ್ಲೂಕು ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಿ.ಬಿ. ಶಿವರಾಜ್ ಅಭಿನಂದನೆ ಸಲ್ಲಿಸಿ, ಮುಂದಿನ ದಿನಗಳಲ್ಲಿ ಇನ್ನಷ್ಟು ಉತ್ತಮ ಸೇವೆ ಸಲ್ಲಿಸುವಂತಾಗಲಿ ಎಂದು ಹಾರೈಸಿದ್ದಾರೆ.

# ಜನಪ್ರಿಯ ಆಸ್ಪತ್ರೆಯಲ್ಲಿ ಕಾರ್ಡಿಯಾಕ್ ಕೇರ್

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರದ ಪ್ರತಿಷ್ಠಿತ ಜನಪ್ರಿಯ ಆಸ್ಪತ್ರೆ ವತಿಯಿಂದ ಜಿಲ್ಲೆಯ ಜನತೆಗೆ ಹೃದಯದ ಚಿಕಿತ್ಸೆಗಾಗಿ ಜನಪ್ರಿಯ ಕಾರ್ಡಿಯಾಕ್ ಕೇರ್ ನೂತನ ಘಟಕ ಆರಂಭಿಸಲಾಗಿದ್ದು, ಸಂಸದ ಶ್ರೇಯಸ್ ಪಟೇಲ್ ಇಂದು ಸಾರ್ವಜನಿಕ ಸೇವೆಗೆ ಲೋಕಾರ್ಪಣೆ ಮಾಡಿದರು.

ನಂತರ ಮಾತನಾಡಿದ ಸಂಸದರು, ಬಡವರು, ಸಾಮಾನ್ಯ ಜನರಿಗೆ

ಉಚಿತ ಹಾಗೂ ರಿಯಾಯ್ತಿ ದರದಲ್ಲಿ ಚಿಕಿತ್ಸೆ ನೀಡಲು ಇರುವ ಸರ್ಕಾರದ ಯೋಜನೆಗಳನ್ನು ಅಳವಡಿಸಿಕೊಂಡು ವೈದ್ಯಕೀಯ ಸೌಲಭ್ಯ ನೀಡಬೇಕು ಎಂದು ಸಲಹೆ ನೀಡಿದರು.

ವಿಶೇಷ ಪ್ಯಾಕೇಜ್ ಘೋಷಣೆ: ಕಾರ್ಡಿಯಾಕ್ ಕೇರ್ ಘಟಕ ಉದ್ಘಾಟನೆ ನಿಮಿತ್ತ ಜೂ.4 ರಿಂದ 30 ರ ವರೆಗೆ ಉಚಿತ ಹೃದಯ ತಜ್ಞರ ಸಲಹೆ, ಟಿಎಂಟಿ (ಟ್ರೆಡ್‌ಮಿಲ್ ಪರೀಕ್ಷೆ) 2ಡಿ ಎಕೋ( ಹೃದಯಸ್ಕ್ಯಾನ್), ಇಸಿಜಿ ಪರೀಕ್ಷೆಗೆ ತಗಲುವ ವೆಚ್ಚ ಒಟ್ಟು

4500 ರೂ. ಆದರೆ ನಮ್ಮ ವತಿಯಿಂದ ಸಾರ್ವಜನಿಕರಿಗೆ ಸದುಪಯೋಗವಾಗಲಿ ಎಂದು ರಿಯಾಯಿತಿ ನೀಡಿ 1500 ರೂ.ದರ ನಿಗದಿಪಡಿಸಲಾಗಿದೆ ಎಂದು ಆಸ್ಪತ್ರೆಯ ಅಧ್ಯಕ್ಷರಾದ ಡಾ.ಅಬ್ದುಲ್ ಬಶೀರ್ ವಿ.ಕೆ. ತಿಳಿಸಿದರು.

ಸಾರ್ವಜನಿಕರು ಈ ಕೊಡುಗೆಯ




## ನೂತನ ಘಟಕ ಕಾರ್ಯಾರಂಭ

ಸದುಪಯೋಗ ಪಡಿಸಿಕೊಳ್ಳಬೇಕು. ಹಾಸನದಲ್ಲಿಯೇ ಕಡಿಮೆ ದರದಲ್ಲಿ ಆಂಜಿಯೋಗ್ರಾಂ ಮತ್ತು ಆಂಜಿಯೋಪ್ಲಾಸ್ಟಿ ಮೇಲೆ ವಿಶೇಷ ಕೊಡುಗೆಗಳು ಲಭ್ಯ ಎಂದ ಅವರು ನಮ್ಮ ಆಸ್ಪತ್ರೆಯಲ್ಲಿ ನಗದು ರಹಿತ ಚಿಕಿತ್ಸಾ ಸೌಲಭ್ಯಗಳು ಲಭ್ಯ, ಸರ್ಕಾರದ ಸೌಲಭ್ಯಗಳಾದ ಎಬಿಆರ್‌ಕೆ / ಆಯುಷ್ಮಾನ್, ಭಾರತ್ (ಬಿಪಿಎಲ್), ಯಶಸ್ವಿನಿ ಯೋಜನೆ, ಇಎಸ್‌ಐ, ಕರ್ನಾಟಕ ಆರೋಗ್ಯ, ಸಂಜೀವಿನಿ ಯೋಜನೆ (ಕೆಎಸ್‌ಎಸ್), ಎಸ್‌ಕೆಡಿಆರ್‌ಡಿಪಿ, ಆರೋಗ್ಯ ಭಾಗ್ಯ ಯೋಜನೆ, ಕೆಎಸ್‌ಆರ್‌ಟಿಸಿ, ಇಸಿಎಚ್‌ಎಸ್ ಎಂಸಿಎಫ್ ಎಲ್ಲಾ ಖಾಸಗಿ ಆರೋಗ್ಯ ವಿಮಾ ಯೋಜನೆಗಳ ಸೌಲಭ್ಯವಿದೆ ಎಂದು ವಿವರಿಸಿದರು.

ಇತ್ತೀಚಿನ ದಿನಗಳಲ್ಲಿ ಜಿಲ್ಲೆಯಲ್ಲಿ ಹೃದಯಾಘಾತದಿಂದ ಸಾವನ್ನಪ್ಪುತ್ತಿರುವುದಕ್ಕೆ ಯಾರೂ ಆತಂಕ ಪಡುವ ಅಗತ್ಯವಿಲ್ಲ.

ಎಲ್ಲಾ ಸಾವುಗಳು ಹೃದಯಾಘಾತದಿಂದ ಸಂಭವಿಸಿದೆ ಎನ್ನುವುದಕ್ಕೆ ಪುರಾವೆ ಇಲ್ಲ, ಆದರೆ ನಾವೆಲ್ಲರೂ ಜಾಗೃತರಾಗಿ

ಇದ್ದು ಮುಂಜಾಗ್ರತವಾಗಿ ಹೃದಯ ಸಂಬಂಧ ಪರೀಕ್ಷೆಗಳನ್ನು ಮಾಡಿಸಿಕೊಳ್ಳೋಣ ಎಂದರು.

ಹೃದಯಾಘಾತಕ್ಕೆ ಹತ್ತು ಹಲವು ಕಾರಣಗಳಿದ್ದು, ಅದನ್ನು ತಡೆಗಟ್ಟಲು ಜೀವನಶೈಲಿ ಬದಲಾಯಿಸಬೇಕು ಮತ್ತು ಆರೋಗ್ಯಕರ ಅಭ್ಯಾಸಗಳನ್ನು ಅಳವಡಿಸಿಕೊಳ್ಳಬೇಕು. ಕ್ರಮಬದ್ಧವಾದ ವ್ಯಾಯಾಮ, ಸಮತೋಲಿತ ಆಹಾರ, ಧೂಮಪಾನ ಮತ್ತು ಮದ್ಯಪಾನ ತ್ಯಜಿಸುವುದು, ಒತ್ತಡ ನಿರ್ವಹಣೆ ಮತ್ತು ನಿಯಮಿತ ಆರೋಗ್ಯ ತಪಾಸಣೆ ಮುಖ್ಯ ಎಂದು ಸಲಹೆ ನೀಡಿದರು.

ಆಸ್ಪತ್ರೆಯ ಹೃದ್ರೋಗ ತಜ್ಞ ವೈದ್ಯರಾದ ಡಾ.ಮಂಜುನಾಥ್ ಎಂ ಮಾತನಾಡಿ, ಎಲ್ಲ ವಯೋಮಾನದವರಲ್ಲೂ ಹೃದಯಸಂಬಂಧಿ ತೊಂದರೆ ಇಂದು ಸಾಮಾನ್ಯವಾಗಿದ್ದು, ಹೃದಯದ ಆರೋಗ್ಯ ಕಾಪಾಡುವುದು ಅತ್ಯವಶ್ಯಕ ಎಂದು ಸಲಹೆ ನೀಡಿದರು. ಯಾವುದೇ ಕಾರಣಕ್ಕೂ ನಿರ್ಲಕ್ಷ್ಯ ವಹಿಸಬಾರದು. ಊಟದಲ್ಲಿ ಸಮತೋಲನ ಕಾಪಾಡಬೇಕು ಎಂದು ಕಿವಿ ಮಾತು ಹೇಳಿದರು.

ಈ ಸಂದರ್ಭದಲ್ಲಿ ಹೆಲ್ತ್ ಪ್ಯಾಕೇಜ್ ಉದ್ಘಾಟಿಸಿದ ಕೆಯೂಡಬ್ಲ್ಯೂಜೆ ರಾಜ್ಯ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ, ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೆ.ಆರ್.ಕೆಂಚೇಗೌಡ, ಮಾಜಿ ಅಧ್ಯಕ್ಷರಾದ ರವಿ ನಾಕಲಗೂಡು, ಬಿ.ಆರ್.ಉದಯಕುಮಾರ್, ಹೆಮ್ಮಿಗೆ ಮೋಹನ್, ಆಸ್ಪತ್ರೆ ವೈದ್ಯರಾದ ಡಾ.ಮನೋಜ್ ಕುಮಾರ್, ನಿರ್ದೇಶಕರಾದ ಶಾರುಕ್‌ಖಾನ್ ಅಬ್ದುಲ್ಲಾ ಮೊದಲಾದವರಿದ್ದರು.

# ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್: ಅರ್ಜಿ ಆಹ್ವಾನ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ದಿನಪತ್ರಿಕೆಗಳು/ಮಾಧ್ಯಮ ಸಂಸ್ಥೆಗಳಲ್ಲಿ ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸುತ್ತಿರುವ ಪತ್ರಕರ್ತರಿಗೆ ತಿದ್ದುಪಡಿ ಮಾಡಲಾದ ಹೊಸ ಮಾರ್ಗಸೂಚಿಯನ್ವಯ ಉಚಿತ ಬಸ್ ಪಾಸ್ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಪತ್ರಕರ್ತರು ಕಾರ್ಯನಿರ್ವಹಿಸುತ್ತಿರುವ ಸಂಸ್ಥೆಗಳಲ್ಲಿ ಪೂರ್ಣಾವಧಿ/ಅರೆಕಾಲಿಕ ವರದಿಗಾರರಾಗಿ ನೇಮಕವಾಗಿದ್ದಲ್ಲಿ ಆಯಾ ಮಾಧ್ಯಮ ಸಂಸ್ಥೆಯ ಸಂಪಾದಕರ/ ಸ್ಥಾನಿಕ ಸಂಪಾದಕರ/ ಮುಖ್ಯಸ್ಥರ ಶಿಫಾರಸ್ಸು ಪತ್ರ ಮತ್ತು ಸೇವಾ ಪ್ರಮಾಣ ಪತ್ರವನ್ನು ಲಗತ್ತಿಸಿ "ಸೇವಾಸಿಂಧು" ಪೋರ್ಟಲ್ ಮೂಲಕ ಆನ್ ಲೈನ್ ನಲ್ಲಿ ಅರ್ಜಿಗಳನ್ನು ಸಲ್ಲಿಸಬಹುದು.

2025ರ ಸೆಪ್ಟೆಂಬರ್ 12ರ ನಂತರ ಅರ್ಜಿಗಳನ್ನು ಸಲ್ಲಿಸಿದ್ದಲ್ಲಿ, ಮತ್ತೊಮ್ಮೆ ಸಲ್ಲಿಸುವ ಅವಶ್ಯಕತೆ ಇರುವುದಿಲ್ಲ, ಈ ಹಿಂದೆ ಇದ್ದ ಮಾರ್ಗಸೂಚಿಯಲ್ಲಿ 11 ತಿಂಗಳ ವೇತನ ಪತ್ರ ಸಲ್ಲಿಸಬೇಕು ಎಂಬ ಷರತ್ತನ್ನು ಸಡಿಲಿಸಿ.

ಆಯಾ ಮಾಧ್ಯಮ ಸಂಸ್ಥೆಯ ಸಂಪಾದಕರ, ಸ್ಥಾನಿಕ ಸಂಪಾದಕರ/ಮುಖ್ಯಸ್ಥರ ಶಿಫಾರಸ್ಸು ಪತ್ರವನ್ನು ಪರಿಗಣಿಸಲು ಅವಕಾಶ ಕಲ್ಪಿಸಲಾಗಿದೆ.

ಆನ್ ಲೈನ್ ನಲ್ಲಿ ಸಲ್ಲಿಸಲಾದ ಅರ್ಜಿ ಮತ್ತು ಲಗತ್ತಿಸಲಾಗಿರುವ ದಾಖಲೆಗಳ ಒಂದು ಪ್ರತಿಯನ್ನು ಆಯಾ ಜಿಲ್ಲೆಯ ವಾರ್ತಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು, ಸ್ವೀಕೃತ ಅರ್ಜಿಗಳನ್ನು ಆಯ್ಕೆ ಸಮಿತಿಯ ಸಭೆಯಲ್ಲಿ ಪರಿಶೀಲಿಸಿ ಬಸ್ ಪಾಸ್ ಮಂಜೂರು ಮಾಡಲಾಗುತ್ತದೆ. ತಾಲ್ಲೂಕು ಮಟ್ಟದ ಪತ್ರಕರ್ತರಿಗೆ ಸುದ್ದಿ ಸಂಗ್ರಹಿಸಲು ಅನುಕೂಲ ಕಲ್ಪಿಸಲು ಸರ್ಕಾರವು ವಾರ್ತಾ ಇಲಾಖೆಯ ಮೂಲಕ ಉಚಿತ ಬಸ್ ಪಾಸ್ ಗಳನ್ನು ನೀಡುತ್ತಿದೆ.

ರಾಜ್ಯದ ಎಲ್ಲಾ ತಾಲ್ಲೂಕುಗಳ ಅರ್ಹ ಪತ್ರಕರ್ತರು ಜೂನ್ 20 ರೊಳಗೆ ಅರ್ಜಿಗಳನ್ನು ಸಲ್ಲಿಸಬೇಕು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರು ತಿಳಿಸಿದ್ದಾರೆ.

# ಜೂ.06 ರಂದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ

ಹಾಸನ : ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದಿಂದ 66/11 ಕೆವಿ ಮೊಸಳೆಹೊಸಹಳ್ಳಿ ಮತ್ತು ಗೊರೂರು ವಿವಿ ಕೇಂದ್ರದಲ್ಲಿ ತ್ರೈಮಾಸಿಕ ನಿರ್ವಹಣಾ ಕೆಲಸವನ್ನು ಹಮ್ಮಿಕೊಂಡಿರುವುದರಿಂದ ಜೂ.06 ರಂದು ಬೆಳಗ್ಗೆ 10 ಗಂಟೆಯಿಂದ ಸಂಜೆ 6 ಗಂಟೆಯವರೆಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗುವುದರಿಂದ ಸಾರ್ವಜನಿಕರು ಸಹಕರಿಸುವಂತೆ ಕಾರ್ಯನಿರ್ವಾಹಕ ಇಂಜಿನಿಯರ್ ತಿಳಿಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248